ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 10–11–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ನಾರಾಯಣ ನೇತ್ರಾಲಯದ ವತಿಯಿಂದ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಉಚಿತ ನೇತ್ರ ತಪಾಸಣಾ ಶಿಬಿರ ಅಧ್ಯಕ್ಷತೆ: **ಶ್ರೀ ಲಾಲ್ ರುಖಮಾ ಪಚುವೋ, ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ,** ಬೆಂಗಳೂರು | 11–11–2014 ರಂದು ಮಂಗಳವಾರ ಅಪರಾಹ್ನ 12–00 ಗಂಟೆಗೆ | ಆರೋಗ್ಯ ಕೇಂದ್ರ, ಕೆ.ಎಸ್.ಆರ್.ಪಿ ವಸತಿ ಸಂಕೀರ್ಣ, 3ನೇ ಪಡೆ, ಕೋರಮಂಗಲ ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಎಪಿಎಂಸಿಗಳಲ್ಲಿ ಆನ್‌ಲೈನ್ ಮಾರಾಟ ವ್ಯವಸ್ಥೆ: ಆಂಧ್ರ ಪ್ರದೇಶ ಮುಖ್ಯಮಂತ್ರಿ ಮೆಚ್ಚುಗೆ

**ಬೆಂಗಳೂರು ನವೆಂಬರ್ 10 (ಕರ್ನಾಟಕ ವಾರ್ತೆ) –**

ರಾಜ್ಯ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಜಾರಿಗೆ ತಂದಿರುವ ಏಕೀಕೃತ ಮಾರುಕಟ್ಟೆ ವ್ಯವಸ್ಥೆ ಹಾಗೂ ಆನ್‌ಲೈನ್ ಮಾರಾಟ ವ್ಯವಸ್ಥೆ ಕುರಿತು ಸಮಗ್ರ ಮಾಹಿತಿಯನ್ನು ಪಡೆದ ಆಂಧ್ರ ಪ್ರದೇಶದ ಮುಖ್ಯ ಮಂತ್ರಿಗಳಾದ ಶ್ರೀ ಎನ್.ಚಂದ್ರಬಾಬು ನಾಯ್ಡು ರವರು ಈ ಯೋಜನೆಯ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು.

ಪ್ರಾತ್ಯಕ್ಷಿಕೆ ಮೂಲಕ ಕೃಷಿ ಮಾರಾಟ ನೀತಿ–2013ನ್ನು ಕರ್ನಾಟಕ ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿರುವ ಕುರಿತು ಸಹಕಾರ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿಗಳಾದ

ಶ್ರೀ ಆರ್.ಮನೋಜ್ ಅವರು ಸವಿವರವಾಗಿ ಮಾಹಿತಿಯನ್ನು ನೀಡಿದರು. ಬಳಿಕ ಕೃಷಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಭರತ್‌ಲಾಲ್ ಮೀನ ಇವರು ಇಲಾಖೆಯಲ್ಲಿ ಜಾರಿಗೆ ತಂದಿರುವ ವಿವಿಧ ರೈತಪರ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು.

ಕರ್ನಾಟಕ ಸರ್ಕಾರದ ಕೃಷಿ ಸಚಿವರಾದ ಶ್ರೀ ಕೃಷ್ಣ ಬೈರೇಗೌಡ ರವರು ಉಪಸ್ಥಿತರಿದ್ದು ಕೃಷಿ ಹಾಗೂ ಕೃಷಿ ಮಾರಾಟ ಸುಧಾರಣೆಯಲ್ಲಿನ ತಮ್ಮ ಅನುಭವವನ್ನು ಚಂದ್ರಬಾಬು ನಾಯ್ಡು ರವರೊಂದಿಗೆ ಹಂಚಿಕೊಂಡರು. ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶ್ರೀ ಕೌಶಿಕ್ ಮುಖರ್ಜಿ ಮತ್ತು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಹಾಗೂ ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ಲತಾ ಕೃಷ್ಣರಾವ್ ಅವರು ಕರ್ನಾಟಕ ಸರ್ಕಾರ ಜಾರಿಗೆ ತಂದಿರುವ ರೈತ ಸ್ನೇಹಿ ಕಾರ್ಯಕ್ರಮಗಳ ಕುರಿತು ಆಂದ್ರ ಪ್ರದೇಶದ ಮುಖ್ಯ ಮಂತ್ರಿಗಳಿಗೆ ಮಾಹಿತಿ ನೀಡಿದರು. ಕೃಷಿ ಮಾರಾಟ ಇಲಾಖೆಯ ನಿರ್ದೇಶಕರಾದ ಶ್ರೀ ಮುದ್ದುಮೋಹನ್ ರವರು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ಸರ್ಕಾರದ ಉನ್ನತ ಅಧಿಕಾರಿಗಳಿಂದ ಮಾಹಿತಿ ಪಡೆದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯ ಮಂತ್ರಿ ಚಂದ್ರಬಾಬು ನಾಯ್ಡುರವರು ಕೃಷಿ ಉತ್ಪನ್ನ ಮಾರಾಟ ಕ್ಷೇತ್ರದಲ್ಲಿ ವಿನೂತನವಾದ ಯೋಜನೆಯನ್ನು ಕರ್ನಾಟಕ ರಾಜ್ಯ ಸರ್ಕಾರ ಜಾರಿಗೆ ತಂದಿರುವುದು ಸ್ವಾಗತಾರ್ಹ ಎಂದು ಅಭಿನಂದಿಸಿದರು.

ರಾಜ್ಯದ ಕೃಷಿ ಮಾರುಕಟ್ಟೆಗಳಲ್ಲಿನ ವಹಿವಾಟನ್ನು ಆನ್‌ಲೈನ್ ಮೂಲಕ ನಡೆಸಲು ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಂಡು ರೈತರಿಗೆ ಹೊಸ ರೂಪವನ್ನು ನೀಡಲಾಗಿದೆ. ರಾಷ್ಟ್ರವ್ಯಾಪಿ ಬೆಳೆಯುತ್ತಿರುವ ತಂತ್ರಜ್ಞಾನ ಕ್ಷೇತ್ರವನ್ನು ಕೃಷಿ ಉತ್ಪನ್ನಗಳ ವ್ಯಾಪಾರ ಮತ್ತು ವಹಿವಾಟಿಗು ಜಾರಿಗೆ ತಂದಿರುವ ರಾಜ್ಯ ಸರ್ಕಾರದ ಕ್ರಮ ಅಭಿವೃದ್ಧಿ ದಿಕ್ಕಿನಲ್ಲಿದೆ. ಇದು ರಾಜ್ಯ ಸರ್ಕಾರದ ಮಹತ್ವದ ಹೆಜ್ಜೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಆನ್‌ಲೈನ್ ಮೂಲಕ ವ್ಯಾಪಾರ ವಹಿವಾಟು ನಡೆಸುವುದರಿಂದ ಮಾರುಕಟ್ಟೆಗಳಲ್ಲಿ ಪಾರದರ್ಶಕತೆ ಮತ್ತು ಸ್ಪರ್ಧಾತ್ಮಕ ಬೆಲೆ ರೈತರ ಉತ್ಪನ್ನಗಳಿಗೆ ದೊರೆಯಲಿದೆ. ಈ ಯೋಜನೆಯನ್ನು ಶೀಘ್ರವೇ ಆಂದ್ರ ಪ್ರದೇಶದಲ್ಲೂ ಜಾರಿಗೆ ತರುವುದಾಗಿ ಚಂದ್ರಬಾಬು ನಾಯ್ಡುರವರು ತಿಳಿಸಿದರು.

ಆಂಧ್ರ ಪ್ರದೇಶ ಸರ್ಕಾರದ ಹಿರಿಯ ಅಧಿಕಾರಿಗಳು, ಕೃಷಿ ಹಾಗೂ ಕೃಷಿ ಮಾರಾಟ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.
(ಇದರೊಂದಿಗೆ ಛಾಯಾಚಿತ್ರ ಲಗತ್ತಿಸಿದೆ)

## <u>ಡಿಸೆಂಬರ್ 1 ರಂದು ಬಾಗಲಕೋಟೆಯಲ್ಲಿ ವಿಶ್ವ ಏಡ್ಸ್ ದಿನಾಚರಣೆ</u>

**ಬೆಂಗಳೂರು, 10ನೇ ನವೆಂಬರ್ (ಕರ್ನಾಟಕ ವಾರ್ತೆ)**

ಡಿಸೆಂಬರ್ 1 ರಂದು ವಿಶ್ವ ಏಡ್ಸ್ ದಿನಾಚರಣೆಯನ್ನು ಬಾಗಲಕೋಟೆ ಜಿಲ್ಲೆಯಲ್ಲಿ ನಡೆಸಲಾಗುವುದೆಂದು ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿಯ ಯೋಜನಾ ನಿರ್ದೇಶಕರಾದ ಶ್ರೀ ಎಸ್.ಜಿ. ರವೀಂದ್ರ ತಿಳಿಸಿದರು. ಅವರು ತಮ್ಮ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಈ ವಿಷಯ ತಿಳಿಸಿದರು.

ಡಿಸೆಂಬರ್ 1 ರಂದು ಅಲ್ಲಿ ರಾಜ್ಯಮಟ್ಟದ ವಿಶ್ವ ಏಡ್ಸ್ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ. ಇದರ ಅಂಗವಾಗಿ ಜಾಥಾ, ರಕ್ತದಾನ ಶಿಬಿರ ಜಾನಪದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು, ಆರೋಗ್ಯ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಸಂಸದರು, ಶಾಸಕರು ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಸುಮಾರು 2000 ಜನರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಸನ್ಮಾನ, ಪ್ರಶಸ್ತಿ ವಿತರಣೆಯನ್ನು ಸಹ ಮಾಡಲಾಗುವುದೆಂದರು. ಸಭೆಯಲ್ಲಿ ಕರ್ನಾಟಕ ಆರೋಗ್ಯ ಪ್ರಚಾರ ಟ್ರಸ್ಟ್‌ನ ನಿರ್ದೇಶಕರಾದ ಶ್ರೀ ಹೆಚ್.ಎಸ್. ಅಶೋಕಾನಂದ್ ಅವರು ಉಪಸ್ಥಿತರಿದ್ದರು.

## ಲೈಂಗಿಕ ದೌರ್ಜನ್ಯ ಪ್ರಕರಣ ಇತ್ಯರ್ಥಕ್ಕೆ ತ್ವರಿತ ನ್ಯಾಯಾಲಯ ಸ್ಥಾಪನೆ: ಗೃಹ ಸಚಿವ ಶ್ರೀ ಕೆ.ಜೆ. ಜಾರ್ಜ್

ಬೆಂಗಳೂರು, ನ. 10 (ಕರ್ನಾಟಕ ವಾರ್ತೆ)–

ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ವಿಲೇವಾರಿ ಮಾಡಲು ರಾಜ್ಯದಲ್ಲಿ 10 ಫಾಸ್ಟ್ ಟ್ರಾಕ್ ನ್ಯಾಯಾಲಯಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ರಾಜ್ಯದ ಉಚ್ಛ ನ್ಯಾಯಾಲಯಕ್ಕೆ ಈ ಬಗ್ಗೆ ಮನವಿ ಮಾಡಿಕೊಳ್ಳಲಾಗಿದ್ದು, ಮೂರು ತ್ವರಿತಗತಿಯ ನ್ಯಾಯಾಲಯ ಸ್ಥಾಪನೆಗೆ ಅನುಮತಿ ನೀಡಿದೆ. ಇದರಲ್ಲಿ ಎರಡು ನ್ಯಾಯಾಲಯಗಳನ್ನು ಬೆಂಗಳೂರಿನಲ್ಲಿ ಇನ್ನೊಂದು ನ್ಯಾಯಾಲಯವನ್ನು ಬೇರೆಡೆ ಪ್ರಾರಂಭಿಸಲು ಚಿಂತಿಸಲಾಗಿದೆ ಎಂದರು.

ಬೆಂಗಳೂರು ನಗರದಲ್ಲಿನ ಸುಮಾರು 180 ಶಾಲೆಗಳು ಸರ್ಕಾರ ಈಗಾಗಲೇ ನಿಗದಿಪಡಿಸಿರುವ ಮಾರ್ಗಸೂಚಿಗಳನ್ನು ಪಾಲನೆ ಮಾಡುತ್ತಿಲ್ಲ. ಈ ಸಂಬಂಧ ನಗರದ ಪೊಲೀಸ್ ಆಯುಕ್ತರು ಈಗಾಗಲೇ ಇಂತಹ ಶಾಲೆಗಳಿಗೆ ನೋಟೀಸ್ ಜಾರಿ ಮಾಡಿದ್ದಾರೆ. ಮಾರ್ಗಸೂಚಿಗಳನ್ನು ಪಾಲಿಸದ ಆಡಳಿತ ಮಂಡಳಿಗಳ ಮೇಲೆ ಐಪಿಸಿ ಸೆಕ್ಷನ್ 180ರ ಅಡಿಯಲ್ಲಿ ಕ್ರಮ ಜರುಗಿಸಲಾಗುವುದು ಎಂದರು.

1ರಿಂದ 5ನೇ ತರಗತಿ ವರೆಗೆ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಒಟ್ಟಿಗೆ ಹೋಗುವ ಶಾಲೆಗಳಲ್ಲಿ ಮಹಿಳಾ ಸಿಬ್ಬಂದಿಯನ್ನು ನೇಮಕ ಮಾಡುವಂತೆ ಈಗಾಗಲೇ ರಚಿಸಲಾಗಿರುವ ಉನ್ನತಾಧಿಕಾರದ ಸಮಿತಿಗೆ ಸಲಹೆ ನೀಡಲಾಗಿದೆ ಎಂದರು.

ಮುಖ್ಯಮಂತ್ರಿಯವರು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ವಿ. ಉಮೇಶ್ ಅವರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಿದ್ದಾರೆ. ಈ ಸಮಿತಿಯು ನೀಡುವ ಶಿಫಾರಸುಗಳನ್ನು ಜಾರಿಗೆ ತರಲಾಗುವುದು ಎಂದರು. ಮಹಿಳೆಯರು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳಿಗೆ ಸಂಬಂಧಿಸಿದ ಮಾಹಿತಿ ನೀಡಲು 1091 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಬಹುದು ಎಂದರು. ಶಾಲಾ ಕಾಲೇಜುಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಿದರೆ ಸಾಲದು. ಆಯಾ ಶಾಲೆಗಳಲ್ಲಿ ನಿಯಂತ್ರಣಾ ಕೊಠಡಿಯನ್ನು ಪ್ರಾರಂಭಿಸಿ, ಶಾಲಾ ಆವರಣದ ಚಲನವಲನ– ಆಗುಹೋಗುಗಳನ್ನು ಗಮನಿಸಲು ಸಿಬ್ಬಂದಿ ನೇಮಕ ಮಾಡುವಂತೆ ಆದೇಶಿಸಲಾಗಿದೆ. ಶಾಲೆಗೆ ನೇಮಕ ಮಾಡುವ ವಿವಿಧ ಹಂತದ ಸಿಬ್ಬಂದಿಯ ಸನ್ನಡತೆ ಬಗ್ಗೆ ಶಾಲಾ ಆಡಳಿತ ಮಂಡಳಿ ಪೂರ್ಣ ಮಾಹಿತಿ ಹೊಂದಿರಬೇಕು.

ಇಂತಹ ಪ್ರಕರಣಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕೆಲಸವನ್ನು ಇಲಾಖೆ, ಜನಸಾಮಾನ್ಯರು ಹಾಗೂ ಮಾಧ್ಯಮಗಳೂ ಮಾಡಬೇಕು ಎಂದರು. ಗೃಹ ಇಲಾಖೆಗೆ ಶೇ. 20 ರಷ್ಟು ಮಹಿಳಾ ಸಿಬ್ಬಂದಿ ನೇಮಕ ಮಾಡಲಾಗುವುದು ಎಂದರು.

ತೀರ್ಥಹಳ್ಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ತನಿಖೆ ನಡೆದಿದ್ದು, ವರದಿ ಬಂದ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಗೃಹ ಸಚಿವರ ಸಲಹೆಗಾರ ಶ್ರೀ ಕೆಂಪಯ್ಯ, ಒಳಾಡಳಿತ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ಶ್ರೀ ಎಸ್.ಕೆ. ಪಟ್ಟನಾಯಕ್, ಪೊಲೀಸ್ ಮಹಾನಿರ್ದೇಶಕ ಶ್ರೀ ಲಾಲ್‌ರೊಖುಮಾ ಪಚಾವೊ, ಬೆಂಗಳೂರು ನಗರ ಪೊಲೀಸ್ ಆಯುಕ್ತ ಎಂ.ಎನ್. ರೆಡ್ಡಿ ಹಾಜರಿದ್ದರು.

## ಅರ್ಜಿ ಆಹ್ವಾನ

**ಬೆಂಗಳೂರು, 10ನೇ ನವೆಂಬರ್ (ಕರ್ನಾಟಕ ವಾರ್ತೆ)**

ಕರ್ನಾಟಕ ಉಚ್ಛ ನ್ಯಾಯಾಲಯವು ತನ್ನ ಅಧೀನ ನ್ಯಾಯಾಲಯಗಳಲ್ಲಿ 32 ತಂತ್ರಾಂಶ ತಂತ್ರಜ್ಞರ (Software Technician) ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಕರ್ನಾಟಕ ಉಚ್ಛ ನ್ಯಾಯಾಲಯದ ವೆಬ್‌ಸೈಟ್ http://karnatakajudiciary.kar.nic.in/recruitment.asp ಮೂಲಕ ಸಲ್ಲಿಸಬಹುದು.

ಅಭ್ಯರ್ಥಿಗಳು ಅರ್ಜಿಯನ್ನು 20ನೇ ನವೆಂಬರ್ 2014 ರಾತ್ರಿ 11.59 ರ ವರೆಗೆ ಸಲ್ಲಿಸಬಹುದು. ಅಭ್ಯರ್ಥಿಗಳು (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1, ಅಂಗವಿಕಲ, ಹೊರತಾಗಿ) ರೂ. 500/-(ಐದುನೂರು ರೂಪಾಯಿಗಳು ಮಾತ್ರ) ಅನ್ನು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಯ ಅಥವಾ ಆನ್‌ಲೈನ್ ಮೂಲಕ ಸಂದಾಯ ಮಾಡಬಹುದು ಎಂದು ಉಚ್ಚ ನ್ಯಾಯಾಲಯದ ರಿಜಿಸ್ಟ್ರಾರ್ (ನೇಮಕಾತಿ) ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮ:ಬಾಬು:ಜಿಪಿಆರ್.

# Applications invited

Bangalore, Nov. 10th (Karnataka Information)

Online applications are invited for the recruitment of 32 posts of Software Technicians on the establishment of Sub-ordinate Courts in the State by the High Court of Karnataka through the online link on http://karnatakajudiciary.kar.nic.in/recruitment.asp

The last date for receipt of online application is fixed on 20-11-2014 before night 11.59 P.M. The applicant (except CAT-1/SC/ST and Physically Handicapped) shall remit an amount of Rs. 500/-(Rupees Five Hundred Only) either through online.

(i) website: https://www.onlinesbi.com/prelogin/icollecthome.htm

or

(ii) Challan Form:Shall download the challan and shall remit the prescribed fee in any branch of State Bank of India.

For notification and detail instructions visit: http://karnatakajudiciary.kar.nic.in/recruitment.asp

SM/BABU/GPR

# ಸಾವಯವ ತಾರಸಿ ಮತ್ತು ಕೈ ತೋಟ ಅಭಿವೃದ್ಧಿ

**ಬೆಂಗಳೂರು, 10ನೇ ನವೆಂಬರ್ (ಕರ್ನಾಟಕ ವಾರ್ತೆ)**

ತೋಟಗಾರಿಕೆ ಇಲಾಖೆಯ ಜೈವಿಕ ಕೇಂದ್ರ, ಹುಳಿಮಾವು, ಬೆಂಗಳೂರು ಇಲ್ಲಿ ದಿನಾಂಕ 21-11-2014 ರಂದು ಬೆಳಿಗ್ಗೆ 9-30 ಗಂಟೆಗೆ ಒಂದು ದಿನ " ಸಾವಯವ ತಾರಸಿ/ ಕೈತೋಟ ಅಭಿವೃದ್ಧಿ" ( Organic Kitchen/Terrace Gardening) ಬಗ್ಗೆ ತರಬೇತಿ ಕಾರ್ಯಕ್ರಮವನ್ನು ನಗರವಾಸಿಗಳಿಗೆ/ರೈತರಿಗೆ/ಸಾರ್ವಜನಿಕರಿಗೆ/ವಿದ್ಯಾರ್ಥಿಗಳಿಗೆ ಒಂದು ದಿವಸ ತರಬೇತಿಯನ್ನು ನೀಡಲಾಗುವುದು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ರೂ 300/- ಗಳನ್ನು ಪಾವತಿಸಿ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಸಮನ್ವಯಾಧಿಕಾರಿ) ಹುಳಿಮಾವು, ಬೆಂಗಳೂರು ರವರ ಕಚೇರಿಯಲ್ಲಿ ತರಬೇತಿಯ ಮುಂಚಿತವಾಗಿ ನೋಂದಣಿಯನ್ನು ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 26582775, 26584904 ಮೊಬೈಲ್ 9449428738 ಇ ಮೇಲ್ : Sadh.co2014@gmail.com.

ಸಮ:ಬಾಬು:ಜಿಪಿಆರ್.